Hh

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.**

ಸಂಖ್ಯೆ:ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/03/2021-22 ದಿನಾಂಕ: 30/12/2021

**-: ಸುತ್ತೋಲೆ :-**

**ವಿಷಯ:** ಜನವರಿ 2022ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸುವ ದಿನಾಂಕ ವಿಸ್ತರಣೆ ಕುರಿತು.

**ಉಲ್ಲೇಖ:** 1. ಈ ಕಛೇರಿ ಅಧಿಸೂಚನೆ ಸಂಖ್ಯೆ: ಸಂಖ್ಯೆ:ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/03/2021-22, ದಿನಾಂಕ: 17/12/2021.

2. ನಿರ್ದೇಶಕರು ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಚಿತ್ರಕಲೆ/ಡ್ರಾ.ಗ್ರೇ.ಪರೀಕ್ಷೆ/1/2021-22, ದಿನಾಂಕ: 29/12/2021.

*****

ಜನವರಿ 2022ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸಲು ಹಾಗೂ ಶುಲ್ಕವನ್ನು ಪಾವತಿಸಲು ದಿನಾಂಕ: 17/12/2022ರಂದು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಆದರೆ ರಾಜ್ಯದ ಕೆಲವು ಪರೀಕ್ಷಾ ಕೇಂದ್ರಗಳಿಂದ, ಪೋಷಕರಿಂದ, ಚಿತ್ರಕಲಾ ಶಿಕ್ಷಕರ ಸಂಘದ ವತಿಯಿಂದ ಹಾಗೂ ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ ಇವರುಗಳಿಂದ ಮಂಡಳಿಗೆ ಆನ್‌ಲೈನ್ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ ಆನ್‌ಲೈನ್ ಅರ್ಜಿಗಳನ್ನು ನೋಂದಾಯಿಸುವ ಹಾಗೂ ಪ್ರಸ್ತಾವನೆಯನ್ನು ಸಲ್ಲಿಸುವ ದಿನಾಂಕಗಳನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಈಗಾಗಲೇ ನಿಗಧಿಪಡಿಸಿರುವ ದಿನಾಂಕ | ವಿಸ್ತರಣೆ ಮಾಡಿದ ದಿನಾಂಕ |
|---|---|---|---|
| 1. | ಮಂಡಳಿ ಜಾಲತಾಣದ Center Login ಮೂಲಕ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಅಂತಿಮ ದಿನಾಂಕ** | 30/12/2021 | 14/01/2022 |
| 2. | ಮಂಡಳಿ ಜಾಲತಾಣದಲ್ಲಿ ಸಂಬಂಧಿಸಿದ Center Login ಮೂಲಕ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಈ ಮೂಲಕ **ಬ್ಯಾಂಕ್‌ಗೆ ಜಮಾ ಮಾಡುವುದು**<br>1). ಕೇಂದ್ರಕ್ಕೆ ಒಂದರಂತೆ ಜನರೇಟ್ ಆಗುವ ಚಲನ್ ಮುದ್ರಿಸಿಕೊಂಡು ನೆಫ್ಟ್/ಆರ್‌ಟಿಜಿಎಸ್ ಮೂಲಕ ಪಾವತಿಸುವುದು.<br>**ಅಥವಾ**<br>2). ಆನ್‌ಲೈನ್ (Debit Card/Credit Card/Net Banking)ಮೂಲಕ ಪಾವತಿಸುವುದು. | 31/12/2021ರಿಂದ 03/01/2022ರವರೆಗೆ | 15/01/2022 ರಿಂದ 18/01/2022 |

| | | | |
|---|---|---|---|
| 3. | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ನಾಮಿನಲ್ ರೋಲ್, ಶುಲ್ಕ ಪಾವತಿಸಿದ ಚಲನ್‌ನ ಮೂಲ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಡಯಟ್‌ಗೆ ಸಲ್ಲಿಸುವುದು ಹಾಗೂ ಡಯಟ್ ಲಾಗಿನ್‌ನಲ್ಲಿ ಉಪನಿರ್ದೇಶಕರು (ಅಭಿವೃದ್ಧಿ) ರವರು ಅನುಮೋದಿಸುವುದು. | 06/01/2022 ರಿಂದ 08/01/2022ರವರೆಗೆ | 19/01/2022 ರಿಂದ 20/01/2022 |
| 4. | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಸಲ್ಲಿಸಿದ ಮೂಲ ಚಲನ್ ಹಾಗೂ ಇತರ ದಾಖಲೆಗಳನ್ನು ಡಯಟ್‌ನಿಂದ ಮಂಡಳಿಗೆ ಕಳುಹಿಸಲು ಕೊನೆಯ ದಿನಾಂಕ | 10/01/2022 | 21/01/2022 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳವರೆಗೆ ವಿದ್ಯಾರ್ಥಿಗಳಿಂದ ಶುಲ್ಕ ಸ್ವೀಕರಿಸಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ನೋಂದಾವಣೆ ಮಾಡಬೇಕಾಗಿರುತ್ತದೆ. ಈ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಡ್ರಾಯಿಂಗ್ ಗ್ರೇಡ್ ಪರೀಕ್ಷಾ ಕೇಂದ್ರದ ಮುಖ್ಯಸ್ಥರ ಗಮನಕ್ಕೆ ತಂದು, ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಡಯಟ್ ಪ್ರಾಂಶುಪಾಲರುರವರು ಅಗತ್ಯ ಕ್ರಮಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

[ಎಂ.ಆರ್. ಮಾರುತಿ]
ನಿರ್ದೇಶಕರು
ಇತರೆ ಪರೀಕ್ಷೆಗಳು

**ಪ್ರತಿಯನ್ನು:-**

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ವಿಭಾಗೀಯ ಸಹನಿರ್ದೇಶಕರು ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗದವರಿಗೆ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
6. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ, ಸೂಕ್ತ ಕ್ರಮಕ್ಕಾಗಿ.
7. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ.
8. ಕೇಂದ್ರಗಳ ಎಲ್ಲಾ ಮುಖ್ಯ ಅಧೀಕ್ಷಕರಿಗೆ, ಸೂಕ್ತ ಕ್ರಮಕ್ಕಾಗಿ.
9. ಹಿರಿಯ ಸಹಾಯಕ ನಿರ್ದೇಶಕರು (ಚಿತ್ರಕಲೆ) ಆಯುಕ್ತರ ಕಛೇರಿ, ಬೆಂಗಳೂರು, ವಿಭಾಗೀಯ ಆಯುಕ್ತರ ಕಛೇರಿ, ಧಾರವಾಡ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
10. ವಿಭಾಗೀಯ ಹಿರಿಯ ಚಿತ್ರಕಲಾ ವಿಷಯ ಪರಿವೀಕ್ಷಕರು ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ ರವರಿಗೆ ಅಗತ್ಯ ಕ್ರಮಕ್ಕಾಗಿ.
11. ಶಾಖಾಧಿಕಾರಿಗಳು, ಗಣಕ ಶಾಖೆ.